ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಶುಕ್ರವಾರ, ದಿನಾಂಕ : 06 ನೇ ಮಾರ್ಚ್, 2020

ಅಲ್ಪಸಂಖ್ಯಾತರ ಕಲ್ಯಾಣ ಯೋಜನೆಗಳ ಬಗ್ಗೆ

ಶ್ರೀ ಕೆ. ಅಬ್ದುಲ್ ಜಬ್ಬಾರ್ (ನಾಮನಿರ್ದೇಶನ ಹೊಂದಿದವರು):-

268 (370) ಮಾನ್ಯ ಕೈಮಗ್ಗ ಮತ್ತು ಜವಳಿ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಅಲ್ಪಸಂಖ್ಯಾತರ ಕಾಲೋನಿಗಳ ಅಭಿವೃದ್ಧಿಗಾಗಿ 2019-20ನೇ ಸಾಲಿನಲ್ಲಿ ಬಿಡುಗಡೆ ಮಾಡಲಾದ ಅನುದಾನ ಎಷ್ಟು ; ಬಳಕೆಯಾದ ಅನುದಾನ ಮತ್ತು ಜಿಲ್ಲಾವಾರು ಪೂರ್ಣಗೊಂಡ ಮತ್ತು ಪ್ರಗತಿಯಲ್ಲಿರುವ ಕಾಮಗಾರಿಗಳು ಯಾವುವು ; (ಸಂಪೂರ್ಣ ವಿವರವುಳ್ಳ ಮಾಹಿತಿ ಒದಗಿಸುವುದು)

(ಆ) 2019-20ನೇ ಸಾಲಿನಲ್ಲಿ ಅಲ್ಪಸಂಖ್ಯಾತರ ಕಲ್ಯಾಣ ನಿರ್ದೇಶನಾಲಯ ಮತ್ತು ಕೆ.ಎಂ.ಡಿ.ಸಿ.ಗಳಿಂದ ಅಲ್ಪಸಂಖ್ಯಾತರ ಕಲ್ಯಾಣಕ್ಕಾಗಿ ರೂಪಿಸಲಾಗಿರುವ ವಿವಿಧ ಯೋಜನೆಗಳಿಗೆ ಸಲ್ಲಿಕೆಯಾದ ಅರ್ಜಿಗಳು ಮತ್ತು ಆಯ್ಕೆಯಾದ ಫಲಾನುಭವಿಗಳು ಎಷ್ಟು ; (ಸಂಪೂರ್ಣ ಮಾಹಿತಿ ಒದಗಿಸುವುದು)

(ಇ) ಕರ್ನಾಟಕ ರಾಜ್ಯ ಉರ್ದು ಅಕಾಡೆಮಿಗೆ ಅಧ್ಯಕ್ಷರು ಮತ್ತು ಸದಸ್ಯರ ನೇಮಕಾತಿ ಮಾಡಲಾಗಿದೆಯೇ ; ಇಲ್ಲದಿದ್ದಲ್ಲಿ, ವಿಳಂಬಕ್ಕೆ ಕಾರಣವೇನು ;

(ಈ) ಬಿದಾಯಿ/ಶಾಧಿಭಾಗ್ಯ ಯೋಜನೆಯಡಿ 2019-20ರಲ್ಲಿ ಸಲ್ಲಿಕೆಯಾದ ಅರ್ಜಿಗಳು ಎಷ್ಟು ; ಅದರಲ್ಲಿ ಫಲಾನುಭವಿಗಳ ಸಂಖ್ಯೆ ಎಷ್ಟು ; ಯೋಜನೆಯು ಅರ್ಹ ಫಲಾನುಭವಿಗಳಿಗೆ ಸರಿಯಾದ ಸಮಯದಲ್ಲಿ ತಲುಪಿದೆಯೇ ?